# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸಾ.ಖ.ರೆಡ್‌ಕ್ರಾಸ್/2023-24 | 3415 ದಿನಾಂಕ:15.12.2023

## : ಸುತ್ತೋಲೆ :

ವಿಷಯ: ದಿನಾಂಕ:28.12.2023 ರಂದು "ಸಂವಾದ ಹಾಗೂ ಅನಿಮಿಯ ಕುರಿತಂತೆ-ಅರಿವು" ಕಾರ್ಯಕ್ರಮದಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: 1. ಡಾ. ಪೂರ್ಣಿಮ ಡಿ., ಸಮನ್ವಯಾಧಿಕಾರಿ, ಯುವ ರೆಡ್‌ಕ್ರಾಸ್ ಘಟಕ, ಇವರ ಮನವಿಪತ್ರ ಸ್ವೀಕೃತ ದಿ:05.12.2023

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:15.12.2023.

* * * * *

ತುಮಕೂರು ವಿಶ್ವವಿದ್ಯಾನಿಲಯದ ಯುವ ರೆಡ್‌ಕ್ರಾಸ್ ಘಟಕ ಹಾಗೂ ಆರೋಗ್ಯ ಭಾರತಿ, ತುಮಕೂರು ತುಮಕೂರು ವತಿಯಿಂದ **ದಿನಾಂಕ:28.12.2023 ರಂದು ಬೆಳಗ್ಗೆ 11.00 ಗಂಟೆಗೆ ವಿಶ್ವವಿದ್ಯಾನಿಲಯದ ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಡಾ. ಅಶೋಕ್ ವಾರ್ಷ್ಣೇಯ್, ಸಲಹಾ ಸಮಿತಿ ಸದಸ್ಯರು, ಆಯುಷ್ ಸಚಿವಾಲಯ, ಭಾರತ ಸರ್ಕಾರ ರವರಿಂದ "ಸಂವಾದ ಹಾಗೂ ಅನಿಮಿಯ ಕುರಿತಂತೆ-ಅರಿವು" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.** ಸದರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು **ಪ್ರೊ.ಎಂ.ವೆಂಕಟೇಶ್ವರಲು, ಮಾನ್ಯ ಕುಲಪತಿಗಳು ತುಮಕೂರು ವಿಶ್ವವಿದ್ಯಾನಿಲಯ** ಇವರು ವಹಿಸಲಿದ್ದಾರೆ. ಸದರಿ ಕಾರ್ಯಕ್ರಮದಲ್ಲಿ **ಶ್ರೀಮತಿ ನಾಹಿದಾ ಜಮ್ ಜಮ್, ಮಾನ್ಯ ಕುಲಸಚಿವರು (ಆಡಳಿತ), ಪ್ರೊ ಪ್ರಸನ್ನಕುಮಾರ್. ಕೆ. ಮಾನ್ಯ ಕುಲಸಚಿವರು (ಪರೀಕ್ಷಾಂಗ)** ತುಮಕೂರು ವಿಶ್ವವಿದ್ಯಾನಿಲಯ ಇವರು ಉಪಸ್ಥಿತರಿರಲಿದ್ದಾರೆ.

ಈ ಹಿನ್ನೆಲೆಯಲ್ಲಿ ಸೂಚಿತ **"ಸಂವಾದ ಹಾಗೂ ಅನಿಮಿಯ ಕುರಿತಂತೆ-ಅರಿವು"** ಕಾರ್ಯಕ್ರಮದಲ್ಲಿ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳು & ಘಟಕ ಕಾಲೇಜುಗಳ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಗೂ ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡುವ ಸಾರ್ವಜನಿಕರು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಂಬಂಧ ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ತಿಳಿಸಿದೆ.

**ಸೂಚಿತ ಮಾಹಿತಿಯನ್ನು ತಮ್ಮ ಅಧೀನದ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರುವುದು.**

ಆದೇಶದ ಮೇರೆಗೆ

15/12/23

ಕುಲಸಚಿವರು

ತುಮಕೂರು ವಿಶ್ವವಿದ್ಯಾನಿಲಯ,
ತುಮಕೂರು

ಗೆ.

1. ಸಮನ್ವಯಾಧಿಕಾರಿ, ಯುವ ರೆಡ್‌ಕ್ರಾಸ್ ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: (ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಘಟಕ ಕಾಲೇಜುಗಳ, ಸ್ನಾತಕೋತ್ತರ ವಿಭಾಗಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)
5. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಚೇರಿ ಪ್ರತಿ